**ಕರ್ನಾಟಕ ಸರ್ಕಾರ**

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

**ಸಂ:ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್-1/2020-21** **ದಿನಾಂಕ:28-3-2020**

**ಅಧಿಕೃತ ಜ್ಞಾಪನ ಪತ್ರ**

**ವಿಷಯ:** ಕೊರೋನಾ ವೈರಸ್ (ಕೋವಿಡ್-19) ನಿಂದ ಉಂಟಾಗಬಹುದಾದ ಪರಿಸ್ಥಿತಿಯನ್ನು ನಿಭಾಯಿಸಲು ತೆರೆಯಲಾಗಿರುವ " ಐಸಿಯು ಸೆಂಟರ್ " ಗಳ ಉಸ್ತುವಾರಿಗಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸುವ ಬಗ್ಗೆ.

****%****

ಕೊರೋನಾ ವೈರಸ್ (ಕೋವಿಡ್-19) ಸಾಂಕ್ರಾಮಿಕ ರೋಗ ತಡೆ ಹಾಗೂ ನಿಯಂತ್ರಣ ಕಾರ್ಯದ ನಿಮಿತ್ತ ಗುರುತಿಸಲಾಗಿರುವ ಸ್ಥಳಗಳಲ್ಲಿ " ಐಸಿಯು ಸೆಂಟರ್ " ತೆರೆಯಲು ಕ್ರಮ ಕೈಗೊಳ್ಳಲಾಗಿದ್ದು, ಇಲ್ಲಿ ಅವಶ್ಯಕ ವ್ಯವಸ್ಥೆ ಕಾರ್ಯವನ್ನು ಕೈಗೊಳ್ಳಲು ಕೆಳಕಂಡ ಅಧಿಕಾರಿಗಳ ತಂಡವನ್ನು ರಚಿಸಿ ಆದೇಶಿಸಿದೆ.

| ಕ್ರಸಂ | ಅಧಿಕಾರಿಗಳ ವಿವರ |
|---|---|
| 1 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ |
| 2 | ಜಿಲ್ಲಾ ಶಸ್ತ್ರಚಿಕಿತ್ಸಕರು<br>ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ |

**ಜವಾಬ್ದಾರಿ ಮತ್ತು ಕರ್ತವ್ಯಗಳು:-**

- ಕೋವಿಡ್-19 ರೋಗ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ " ಐಸಿಯು ಸೆಂಟರ್ " ( ಎಂ.ಸಿ.ಹೆಚ್ ಹಾಗೂ ಬಸವೇಶ್ವರ ವೈದ್ಯಕೀಯ ಕಾಲೇಜು & ಆಸ್ಪತ್ರೆ ಇಲ್ಲಿ ಕನಿಷ್ಠ 20 ವೆಂಟಿಲೇಟರ್ ವ್ಯವಸ್ಥೆ) ಅವಶ್ಯವಿರುವ ಮೂಲಭೂತ ಸೌಕರ್ಯಗಳ ವ್ಯವಸ್ಥೆಗೆ ಕ್ರಮವಹಿಸುವುದು.
- " ಐಸಿಯು ಸೆಂಟರ್ " ಅವಶ್ಯವಿರುವ ಸಾಮಗ್ರಿಗಳ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲಾಗಿರುವ ತಂಡಕ್ಕೆ ಬೇಡಿಕೆ ಪಟ್ಟಿ ಒದಗಿಸಿ, ಸಾಮಗ್ರಿಗಳನ್ನು ದೊರಕಿಸುವ ಕಾರ್ಯ ನಿರ್ವಹಿಸುವುದು.
- ಕೋವಿಡ್-19 ವೈದ್ಯಕೀಯ ರಕ್ಷಣಾ ಸಾಮಗ್ರಿಗಳನ್ನು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ ಇವರಿಂದ ಪೂರ್ವಾನುಮೋದನೆ ಪಡೆದು ಬಳಕೆ ಮಾಡುವುದು ಹಾಗೂ ಪಡೆಯಲಾದ ಸಾಮಗ್ರಿಗಳಿಗೆ ಪ್ರತ್ಯೇಕವಾಗಿ ಸ್ಟಾಕ್ ಮತ್ತು ವಿತರಣಾ ವಹಿಯನ್ನು ಹಾಗೂ ಬಳಕೆ ಹಾಗೂ ಉಳಿಕೆ ಪ್ರಮಾಣದ ಬಗ್ಗೆ ಮಾಹಿತಿಯನ್ನು ಸಲ್ಲಿಸುವುದು.
- " ಐಸಿಯು ಸೆಂಟರ್ " ದಾಖಲಾಗುವ ರೋಗಿಗಳಿಗೆ ವೈಯಕ್ತಿಕ ರಕ್ಷಣಾ ಸಾಮಗ್ರಿಗಳನ್ನು ಒದಗಿಸುವ ಕಾರ್ಯವನ್ನು ನಿರ್ವಹಿಸುವ ವ್ಯವಸ್ಥೆ ಮಾಡುವುದು.

- " ಐಸಿಯು ಸೆಂಟರ್ "ಗಳಲ್ಲಿ ಅಗತ್ಯ ವೈದ್ಯಕೀಯ ಸಿಬ್ಬಂದಿಗಳನ್ನು ಪಾಳಿ ಆಧಾರದ ಮೇಲೆ ಕಾರ್ಯನಿರ್ವಹಿಸುವ ವ್ಯವಸ್ಥೆ ಮಾಡುವುದು.
- ಜಿಲ್ಲಾಧಿಕಾರಿಗಳು ಕಾಲ ಕಾಲಕ್ಕೆ ನೀಡುವ ಸಲಹೆ, ಸೂಚನೆಗಳಂತೆ ಕಾರ್ಯನಿರ್ವಹಿಸುವುದು.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು,
ಚಿತ್ರದುರ್ಗ ಜಿಲ್ಲೆ

ಪ್ರತಿಯನ್ನು:-

1. ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
3. ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ
4. ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ
5. ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ.